ಅ) ಹೌದು

ಆ) ಕೇಂದ್ರ ಸರ್ಕಾರದಿಂದ ಯಾವುದೇ ಅನುದಾನ ಮಂಜೂರಾಗಿರುವುದಿಲ್ಲ.

ಇ) ಉದ್ಭವಿಸುವುದಿಲ್ಲ

ಈ) ಹೊಸ ವೈದ್ಯ ಕಾಲೇಜುಗಳಲ್ಲಿ ಪ್ರಸ್ತುತ ಖಾಲಿ ಇರುವ ವೈದ್ಯರುಗಳ ಮತ್ತು ಉನ್ಯಾಸಕರುಗಳ/ಸಹಾಯಕ ಪ್ರಾಧ್ಯಾಪಕರುಗಳ ಹುದ್ದೆಗಳ ವಿವರ ಕೆಳಕಂಡಂತಿದೆ.

ಕ್ರ. ಸಂ.	ಕಾಲೇಜಿನ ಹೆಸರು	ಖಾಲಿ ಇರುವ ಉಪನ್ಯಾಸಕರು/ಸಹಾಯಕ ಪ್ರಾಧ್ಯಾಪಕರ ಹುದ್ದೆಗಳ ಸಂಖ್ಯೆ	ಖಾಲಿ ಇರುವ ವೈದ್ಯರ ಸಂಖ್ಯೆ
1.	ಶಿವಮೊಗ್ಗ ವೈದ್ಯಕೀಯ ವಿಜ್ಞಾನಗಳ ಸಂಸ್ಥೆ, ಶಿವಮೊಗ್ಗ	25	01
2	ಹಾಸನ ವೈದ್ಯಕೀಯ ವಿಜ್ಞಾನಗಳ ಸಂಸ್ಥೆ, ಹಾಸನ	00	38
3	ಬೆಳಗಾವಿ ವೈದ್ಯಕೀಯ ವಿಜ್ಞಾನಗಳ ಸಂಸ್ಥೆ, ಬೆಳಗಾವಿ	00	48
4	ರಾಯಚೂರು ವೈದ್ಯಕೀಯ ವಿಜ್ಞಾನಗಳ ಸಂಸ್ಥೆ, ರಾಯಚೂರು	05	38
5	ಬೀದರ್ ವೈದ್ಯಕೀಯ ವಿಜ್ಞಾನಗಳ ಸಂಸ್ಥೆ, ಬೀದರ್	00	01
6	ಮಂಡ್ಯ ವೈದ್ಯಕೀಯ ವಿಜ್ಞಾನಗಳ ಸಂಸ್ಥೆ, ಮಂಡ್ಯ	20	46

ಸದರಿ ಕಾಲೇಜುಗಳ ಖಾಲಿಯಿರುವ ಹುದ್ದೆಗಳನ್ನು ಕಾಲ ಕಾಲಕ್ಕೆ ನೇರ ಸಂದರ್ಶನಗಳ ಮುಖಾಂತರ ಭರ್ತಿ ಮಾಡಲು ಕ್ರಮ ಕೈಗೊಳ್ಳಲಾಗುತ್ತಿದೆ.

ರಾಷ್ಟ್ರೀಯ ಗ್ರಾಮೀಣ ಆರೋಗ್ಯ ಅಭಿಯಾನ ಯೋಜನೆ

502(968); ಶ್ರೀ ಹ್ಯಾರಿಸ್ ಎನ್.ಎ. (ಶಾಂತಿ ನಗರ)

ಅ) ಕಳೆದ ಮೂರು ವರ್ಷಗಳಲ್ಲಿ ಕೇಂದ್ರ ಸರ್ಕಾರ ಪುರಸ್ಕೃತ ರಾಷ್ಟ್ರೀಯ ಗ್ರಾಮೀಣ ಆರೋಗ್ಯ ಅಭಿಯಾನ ಯೋಜನೆಯ ಅನುಷ್ಠಾನದ ವಿವರಗಳೇನು;

ಆ) ಕಾರ್ಯಕ್ರಮದ ಅನುಷ್ಠಾನಕ್ಕೆ ಕೇಂದ್ರ ಸರ್ಕಾರದಿಂದ ಸದರಿ ಅವಧಿಯಲ್ಲಿ ಮಂಜೂರಾದ ಅನುದಾನದ ಮೊತ್ತ ಎಷ್ಟು;

ಇ) ಈ ಅವಧಿಯಲ್ಲಿ ಕೇಂದ್ರ ಸರ್ಕಾರದ ಆರೋಗ್ಯ ಸೇವಾ ಯೋಜನೆಗಳ ಮೂಲಕ ರಾಜ್ಯಕ್ಕೆ ಮಂಜೂರಾದ ಅನುದಾನದ ಮೊತ್ತ ಎಷ್ಟು?

ಶ್ರೀ. ಯು.ಟಿ. ಖಾದರ್ (ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು).

ಅ) ರಾಜ್ಯದಲ್ಲಿ ಕಳೆದ ಮೂರು ವರ್ಷಗಳಲ್ಲಿ ರಾಷ್ಟ್ರೀಯ ಗ್ರಾಮೀಣ ಆರೋಗ್ಯ ಅಭಿಯಾನ ಕಾರ್ಯಕ್ರಮಗಳ ಅನುಷ್ಠಾನದ ವಿವರಗಳನ್ನು ಅನುಬಂಧದಲ್ಲಿ ನೀಡಲಾಗಿದೆ.

ಆ) ಕೇಂದ್ರ ಸರ್ಕಾರದಿಂದ ಸದರಿ ಅವಧಿಗೆ ಮಂಜೂರಾದ ಅನುದಾನದ ವಿವರಗಳು ಈ ಕೆಳಕಂಡಂತಿದೆ:

₹ ಲಕ್ಷಗಳಲ್ಲಿ

2010-11	87464 01
2011-12	86440 44
2012-13	105790 31
ಒಟ್ಟು	**279694.76**

ಇ) ಆರೋಗ್ಯ ಸೇವಾ ಯೋಜನೆಗಳ ಮೂಲಕ ರಾಜ್ಯಕ್ಕೆ ಮಂಜೂರಾದ ಅನುದಾನದ ಮೊತ್ತ ಈ ಕೆಳಕಂಡಂತಿದೆ. ರಾಷ್ಟ್ರೀಯ ಅಂಧತ್ವ ನಿಯಂತ್ರಣ ಕಾರ್ಯಕ್ರಮ:

₹ ಲಕ್ಷಗಳಲ್ಲಿ

2010–11	1296.76
2011–12	1131.86
2012–13	1541.96
ಒಟ್ಟು	**3970.58**

ಐ.ಡಿ.ಎಸ್.ಪಿ ಕಾರ್ಯಕ್ರಮ:

₹ ಲಕ್ಷಗಳಲ್ಲಿ

2010–11	218.19
2011–12	103.48
2012–13	214.22
ಒಟ್ಟು	**535.89**

ರಾಜ್ಯ ರಸ್ತೆ ಸಾರಿಗೆ ಆದಾಯಗಳಿಕೆ

503(969); ಶ್ರೀ ಎನ್.ಎ. ಹ್ಯಾರಿಸ್ (ಶಾಂತಿ ನಗರ)

1) ರಾಜ್ಯ ರಸ್ತೆ ಸಾರಿಗೆ ಸಂಸ್ಥೆಯ ಆದಾಯ ಹೆಚ್ಚಳಕ್ಕಾಗಿ ನೂತನ ಸರ್ಕಾರ ಹಮ್ಮಿಕೊಂಡ ಕಾರ್ಯಕ್ರಮಗಳೇನು;

2) ಸಂಸ್ಥೆಯು ಆದಾಯ ಸೋರಿಕೆ ತಡೆಗಟ್ಟುವಲ್ಲಿ ಕೈಗೊಂಡ ಕ್ರಮಗಳೇನು;

3) ಆದಾಯ ಸೋರಿಕೆಯಲ್ಲಿ ಬಳಗೊಂಡ ಅವ್ಯವಹಾರಗಳ ಪ್ರಕರಣಗಳನ್ನು ಗುರುತಿಸಿ ತಪ್ಪಿತಸ್ಥರ ಮೇಲೆ ಕ್ರಮ ಜರುಗಿಸಲಾಗಿದೆಯೇ;

4) ಸಾರಿಗೆ ಸಂಸ್ಥೆಯಲ್ಲಿನ ಪಟ್ಟಭದ್ರ ಹಿತಾಸಕ್ತಿಗಳನ್ನು ನಿಷ್ಕ್ರಿಯೆಗೊಳಿಸಲು ಸಂಸ್ಥೆಯ ಪರಿಣಾಮಕಾರಿ ಕ್ರಮಗಳೇನು?

ಶ್ರೀ ರಾಮಲಿಂಗಾರೆಡ್ಡಿ (ಮಾನ್ಯ ಸಾರಿಗೆ ಸಚಿವರು)